148

## ವಿಧಾನ ಪರಿಷತ್ತು ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜು ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

ವಿಷಯ: ರಾಜ್ಯದಲ್ಲಿ ಸೈಬರ್ ಅಪರಾಧಗಳು ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇವೆ. ಸೈಬರ್ ಅಪರಾಧದಲ್ಲಿ ಕರ್ನಾಟಕ ಮೂರನೇ ಸ್ಥಾನದಲ್ಲಿದೆ. ರಾಜ್ಯದ ಪೈಕಿ ಬೆಂಗಳೂರು ಮೊದಲ ಸ್ಥಾನದಲ್ಲಿದೆ. ಇನ್ನು ಕರ್ನಾಟಕದ ಜನರು ಕೋಟ್ಯಾಂತರ ರೂಪಾಯಿ ಹಣವನ್ನು ನಿತ್ಯ ಕಳೆದುಕೊಳ್ಳುತ್ತಿದ್ದಾರೆ. 4 ವರ್ಷಗಳಲ್ಲಿ 446 ಕೋಟಿರೂಗೂ ಅಧಿಕವನ್ನು ಸೈಬರ್ ವಂಚಕರು ಲೂಟಿ ಮಾಡಿದ್ದಾರೆ.

ಒಟಿಪಿ, ಕ್ರಿಪ್ಟೋಕರೆನ್ಸಿ ಹೂಡಿಕೆ, ಲಕ್ಕಿ ಡ್ರಾ, ಸಾಲ ನೀಡಿಕೆ, ಸ್ಕಿಮ್ಮಿಂಗ್, ಉಡುಗೊರೆ ನೆಪ, ಕ್ಯೂಆರ್‌ಕೋಡ್ ಸ್ಕ್ಯಾನ್ ಸೇರಿ ಹತ್ತು ಹಲವು ವಂಚನಾ ಮಾರ್ಗಗಳ ಮೂಲಕ ಕಳೆದ ವರ್ಷ 363 ಕೋಟಿ ರೂಗಳನ್ನು ವಂಚಕರು ಲಪಟಾಯಿಸಿದ್ದಾರೆ. ಕಳೆದ ನಾಲ್ಕು ವರ್ಷಗಳಲ್ಲಿ 722 ಕೋಟಿರೂ ವಂಚಕರ ಪಾಲಾಗಿದೆ. ಈ ವಿಷಯವು ಸಾರ್ವಜನಿಕರ ಮಹತ್ವದಾಗಿರುವ ಕುರಿತು.

ಉತ್ತರ: ರಾಜ್ಯದಲ್ಲಿ ಸೈಬರ್ ಅಪರಾಧಗಳ ಕುರಿತಂತೆ ಕಳೆದ ಮೂರು ವರ್ಷಗಳಲ್ಲಿ ಸೈಬರ್ ಅಪರಾಧಗಳಡಿಯಲ್ಲಿ ದಾಖಲಿಸಿರುವ ಪ್ರಕರಣಗಳು, ಗುರುತಿಸಿರುವ ಆರೋಪಿಗಳು ಮತ್ತು ಬಂಧಿಸಿರುವ ಆರೋಪಿಗಳ ಸಂಖ್ಯೆ ಈ ಕೆಳಕಂಡಂತಿದೆ.

| ವರ್ಷ | ಸೈಬರ್ ಅಪರಾಧಗಳ ವರದಿ | ಸೈಬರ್ ಅಪರಾಧಗಳಲ್ಲಿ ಗುರುತಿಸಿರುವ ಆರೋಪಿಗಳು | ಸೈಬರ್ ಅಪರಾಧ ಪ್ರಕರಣಗಳಲ್ಲಿ ಬಂಧಿಸಿರುವ ಆರೋಪಿಗಳು |
|---|---|---|---|
| 2021 | 8143 | 3586 | 544 |
| 2022 | 12551 | 3454 | 545 |
| 2023 (25 ನವೆಂಬರ್ ವರೆಗೆ) | 19478 | 5139 | 308 |

### ಸೈಬರ್ ಅಪರಾಧಗಳ ಕುರಿತಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕುರಿತು ಕೈಗೊಂಡಿರುವ ಕ್ರಮಗಳು:

- ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವಿಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ. ಸೈಬರ್ ಜಾಗೃತಿ ಬಗ್ಗೆ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಸಾರ್ವಜನಿಕರಿಗೆ ಸಮಾಜಿಕ ಜಾಲತಾಣಗಳ ಮೂಲಕ ಸೈಬರ್ ವಂಚನೆಗಳ ಬಗ್ಗೆ ಅರಿವು ಮೂಡಿಸಿ, ಒ.ಟಿ.ಪಿ. ಲಿಂಕ್‌ಗಳು, ನಕಲಿ ವೆಬ್‌ಸೈಟ್‌ಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ

Scanned with CamScanner

ಸೈಬರ್ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಅನುಸರಿಸಲಾಗುತ್ತಿದೆ.

- ಸರ್ಕಾರವು ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಇ.ಎನ್ ಪೊಲೀಸ್‌ಠಾಣೆ) ಸ್ಥಾಪಿಸಿರುತ್ತದೆ. ಒಟ್ಟು 43 ಸಿ.ಇ.ಎನ್ ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.
- ಸೈಬರ್ ಕ್ರೈಂ ಪೊಲೀಸ್ ಠಾಣೆಗಳಲ್ಲಿನ ಸಿಬ್ಬಂದಿಗಳಿಗೆ ಸೈಬರ್ ಅಪರಾಧಗಳ ತನಿಖಾ ಕ್ರಮಗಳ ಬಗ್ಗೆ ತರಬೇತಿಯನ್ನು ನೀಡಿ, ಸೈಬರ್ ವಂಚಕರು/ಆರೋಪಿಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ರೀತ್ಯ ಕ್ರಮ ಕೈಗೊಂಡು ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗುತ್ತಿದೆ.
- ಕೇಂದ್ರ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ National Cyber Crime Reporting Portal ಅನ್ನು ಪ್ರಾರಂಭಿಸಿದ್ದು ಈ ಮೂಲಕ 1930 ಹಾಗು 112 ಸಹಾಯವಾಣಿಯನ್ನು ಸಾರ್ವಜನಿಕರಿಗೆ ಪ್ರಾರಂಭಿಸಲಾಗಿದ್ದು, ವಂಚನೆಗೆ ಒಳಗಾದಾಗ ಈ ಪೋರ್ಟಲ್ ಮೂಲಕ ಪ್ರಕರಣವನ್ನು ದಾಖಲಿಸಲು ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ. ಪೋರ್ಟಲ್‌ನಿಂದ ರವಾನೆಯಾದಂತಹ ದೂರುಗಳನ್ನು ಸೆನ್ ಪೊಲೀಸ್ ಠಾಣೆಗಳಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.
- ಅಲ್ಲದೆ ಪ್ರತಿ ಪೊಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.
- ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸರ್ಕಾರವು ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳಿಂದಲೂ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.
- ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cybercrime Investigation Training & Research (CCITR) ಘಟಕವನ್ನು ಪ್ರಾರಂಭಿಸಲಾಗಿದ್ದು, ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.
- ಸಿಐಡಿಯ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ 2019 ರಿಂದ ಸರ್ಕಾರಿ ಸಂಸ್ಥೆಗಳು ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.
- ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗಾಗಿ ಸಂಬಂಧಿಸಿದಂತೆ (Cyber Investigation Manual) ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ.

---

ಹಚ್‌ಡಿ 49 ಪಿಸಿಕ್ಯೂ 2023

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು